ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

# ಪಟ್ಟಿ – ೨೦

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೇ ಅಧಿವೇಶನ**
**(ಮುಂದುವರೆದ ಉಪವೇಶನಗಳು)**
**ಮಂಗಳವಾರ, ದಿನಾಂಕ: ೧೫ನೇ ಜೂನ್, ೨೦೧೬**

---

**ಸಮೂಹ – II**

೧. ಇಂಧನ ಸಚಿವರು

೨. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಕೃಷಿ ಸಚಿವರು

೫. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು

೬. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು

---

## ಬೆಳಗಾವಿ ಜಿಲ್ಲೆಯ ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳು ನಿರ್ವಹಣೆಯಿಲ್ಲದೆ ಹದಗೆಟ್ಟಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೮೬ (೨೯೧೧) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳು ತೀರ ಹದಗೆಟ್ಟಿದ್ದು, ಕನಿಷ್ಠ ನಿರ್ವಹಣೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಸ್ತೆ ನಿರ್ಮಿಸಲು ಮತ್ತು ಸರಿಯಾದ ನಿರ್ವಹಣೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ೨೦೧೪-೧೫, ೨೦೧೫-೧೬ ಹಾಗೂ ೨೦೧೬-೧೭ನೇ ಸಾಲಿನಲ್ಲಿ ರಾಜ್ಯದಲ್ಲಿ ಒಟ್ಟು ಎಷ್ಟು ಹೆದ್ದಾರಿ ರಸ್ತೆಗಳನ್ನು ಮೇಲ್ದರ್ಜೆಗೇರಿಸಲಾಗಿದೆ ; ಈ ಯೋಜನೆಗೆ ಸರ್ಕಾರ ಮೀಸಲಿಟ್ಟಿರುವ ಅನುದಾನವೆಷ್ಟು ; ಬಳಕೆಯಾದ ಅನುದಾನವೆಷ್ಟು ; (ವಿವರ ಒದಗಿಸುವುದು)

(ಈ) ೨೦೧೪-೧೫, ೨೦೧೫-೧೬ ಹಾಗೂ ೨೦೧೬-೧೭ನೇ ಸಾಲಿನಲ್ಲಿ ನಬಾರ್ಡ್, ೩೦೫೪, ಸಿಆರ್‌ಫ್, ಎಸ್‌ಸಿಪಿ/ಟಿಎಸ್‌ಪಿ, ಅಪೆಂಡಿಕ್ಸ್ ಯೋಜನೆಗಳಡಿ ಬೆಳಗಾವಿ ಜಿಲ್ಲೆಗೆ ಬಿಡುಗಡೆಯಾದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಉ) ಆ ಪೈಕಿ ೨೦೧೩-೧೪, ೨೦೧೪-೧೫, ೨೦೧೫-೧೬ ಹಾಗೂ ೨೦೧೬-೧೭ನೇ ಸಾಲಿನಲ್ಲಿ ಚಿಕ್ಕೋಡಿ-ಸದಲಗಾ ವಿಧಾನ ಸಭಾ ಕ್ಷೇತ್ರಕ್ಕೆ ಬಿಡುಗಡೆಯಾದ ಒಟ್ಟು ಅನುದಾನವೆಷ್ಟು ; ಸದರಿ ಕಾಮಗಾರಿಗಳು ಪೂರ್ಣಗೊಂಡಿವೆಯೇ ; ಯಾವ ಹಂತದಲ್ಲಿವೆ ; (ವರ್ಷವಾರು ವಿವರ ಒದಗಿಸುವುದು)

(ಊ) ಪಾರದರ್ಶಕ ಕಾಯ್ದೆಯಡಿಯಲ್ಲಿ ಸದರಿ ಕಾಮಗಾರಿಗಳ ವಿವರಣಾ ಫಲಕ ಅಂದರೆ ಟೆಂಡರ್ ಮೊತ್ತ, ಗುತ್ತಿಗೆ ವಿವರ, ಎಷ್ಟು ವರ್ಷಗಳ ನಿರ್ವಹಣೆ ಮಾಡಲಾಗುವುದು, ಎಂಬ ಕಾಮಗಾರಿಗಳ ವಿವರಣಾ ಫಲಕಗಳನ್ನು ಹಾಕದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಪ್ರತಿ ಕಾಮಗಾರಿಗಳಿಗೂ ಕಾಮಗಾರಿಗಳ ವಿವರಣಾ ಫಲಕಗಳನ್ನು ಹಾಕಿಸಲು ಸರ್ಕಾರವು ಏನು ಕ್ರಮ ಕೈಗೊಳ್ಳುವುದು ? (ವಿವರ ನೀಡುವುದು)

## ಮಂಡ್ಯ, ಮೈಸೂರು ಲೋಕೋಪಯೋಗಿ ಇಲಾಖಾ ಕಾಮಗಾರಿಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೨೮೭ (೨೮೧೫) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಮತ್ತು ಮೈಸೂರು ಜಿಲ್ಲೆಗಳಲ್ಲಿ ಲೋಕೋಪಯೋಗಿ ಇಲಾಖೆಯಿಂದ ದಿನಾಂಕ: ೧೮.೫.೨೦೧೩ ರಿಂದ ೧೫.೫.೨೦೧೮ರ ವರೆಗೆ ಕೈಗೊಂಡಿರುವ ಒಂದು ಕೋಟಿಗೂ ಮೇಲ್ಪಟ್ಟ ಅಂದಾಜು ಮೊತ್ತದ ಕಾಮಗಾರಿಗಳು ಎಷ್ಟು ; ಈ ಕಾಮಗಾರಿಗಳಿಗೆ ಟೆಂಡರನ್ನು ಯಾವಾಗ ಕರೆಯಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಕಾಮಗಾರಿಯ ಟೆಂಡರ್‌ನಲ್ಲಿ ಎಷ್ಟು ಜನ ಭಾಗವಹಿಸಿರುತ್ತಾರೆ ; (ವಿವರ ನೀಡುವುದು)

(ಇ) ಈ ಕಾಮಗಾರಿಗಾಗಿ ಎಷ್ಟು ಜನರ ಟೆಂಡರ್ ಸ್ವೀಕೃತವಾಗಿದೆ ; ಮತ್ತು ಎಷ್ಟು ಜನರ ಟೆಂಡರ್‌ನ್ನು ತಿರಸ್ಕರಿಸಲಾಗಿದೆ ; (ವಿವರ ನೀಡುವುದು)

(ಈ) ಕಡಿಮೆ ಬೆಲೆ ಇರುವವರನ್ನು ತಿರಸ್ಕರಿಸಿ ಹೆಚ್ಚಿನ ಬೆಲೆ ಹಾಕಿದವರಿಗೆ ಟೆಂಡರ್ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಮಾಹಿತಿ ನೀಡುವುದು)

(ಉ) ಬಂದಿದ್ದಲ್ಲಿ, ಎಷ್ಟು ಜನರಿಗೆ ಹೆಚ್ಚಿನ ಬೆಲೆ ಟೆಂಡರ್ ಹಾಕಿದವರಿಗೆ ಟೆಂಡರ್ ನೀಡಲಾಗಿದೆ ; (ಮಾಹಿತಿ ನೀಡುವುದು)

(ಊ) ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ನಾಡ ಕಛೇರಿ, ಅಟಲ್ ಜನಸ್ನೇಹಿ ಕೇಂದ್ರಗಳಿಗೆ ನಿರಂತರ ವಿದ್ಯುತ್ ಪೂರೈಕೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೮೮ (೨೮೭೪) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಗ್ರಾಮ ಹಾಗೂ ಪಟ್ಟಣಗಳಲ್ಲಿ ವಿದ್ಯುತ್ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ವಿದ್ಯುತ್ ಕೊರತೆಯಿಂದ ನಾಡ ಕಛೇರಿ, ಅಟಲ್ ಜನಸ್ನೇಹಿ ಕೇಂದ್ರಗಳಿಗೆ ಬರುವ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ನಿವಾರಿಸಲು ನಾಡಕಛೇರಿ, ಅಟಲ್ ಜನಸ್ನೇಹಿ ಕೇಂದ್ರಗಳಿಗೆ ನಿರಂತರ ವಿದ್ಯುತ್ ಒದಗಿಸಲು ಯಾವ ರೀತಿಯ ಪರ್ಯಾಯ ವ್ಯವಸ್ಥೆ ಕಲ್ಪಿಸಿಕೊಡಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ರೈತರ ಅಭಿವೃದ್ಧಿಗಾಗಿ ಕೃಷಿಭಾಗ್ಯ ಯೋಜನೆಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೨೮೯ (೨೮೪೦) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ರೈತರ ಅಭಿವೃದ್ಧಿಗಾಗಿ ಕೃಷಿ ಭಾಗ್ಯ ಯೋಜನೆಯನ್ನು ಜಾರಿಗೆ ತಂದಿರುವುದು ನಿಜವೇ ;

(ಆ) ಹಾಗಿದ್ದರೆ, ಇದರಲ್ಲಿ ಯಾವ ಯಾವ ಯೋಜನೆಗಳನ್ನು ಸರ್ಕಾರ ಜಾರಿ ಮಾಡಿದೆ ;

(ಇ) ೨೦೧೩–೧೪ ರಿಂದ ಇದುವರೆವಿಗೆ ಈ ಯೋಜನೆಗಳಿಗೆ ಆಯವ್ಯಯದಲ್ಲಿ ನಿಗದಿ ಮಾಡಿದ ಹಣ ಎಷ್ಟು ; ಖರ್ಚು ಮಾಡಿದ ಹಣ ಎಷ್ಟು ; ಫಲಾನುಭವಿಗಳ ಸಂಖ್ಯೆ ಎಷ್ಟು ; ಈ ಯೋಜನೆಗಳಿಗೆ ಕೇಂದ್ರ ಸರ್ಕಾರದಿಂದ ಒದಗಿಸಲಾಗಿರುವ ಅನುದಾನ ಎಷ್ಟು ; ರಾಜ್ಯ ಸರ್ಕಾರದ ಅನುದಾನ ಎಷ್ಟು ; ಯೋಜನಾವಾರು, ವರ್ಷವಾರು ಮತ್ತು ಕೇಂದ್ರ ಹಾಗೂ ರಾಜ್ಯದ ಶೇಕಡವಾರು ಅನುದಾನ ಎಷ್ಟು ? (ವಿವರ ನೀಡುವುದು)

## ರಾಜ್ಯ ಸರ್ಕಾರ ಹಾಲಿಗೆ ಪ್ರೋತ್ಸಾಹಧನ ನೀಡುವ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೯೦ (೨೮೨೩) ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ಹಾಲಿಗೆ ಎಷ್ಟು ಪ್ರೋತ್ಸಾಹ ಧನ ನೀಡುತ್ತಿದೆ ; ಈ ಪ್ರೋತ್ಸಾಹಧನದ ಫಲಾನುಭವಿಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ವರ್ಷ ಆಗಸ್ಟ್ ತಿಂಗಳಿನಿಂದಲೂ ಹಾಲಿಗೆ ಪ್ರೋತ್ಸಾಹಧನ ನೀಡುವಂತೆ ಸರ್ಕಾರ ಹೇಳಿದ್ದು, ಕೆಲವು ರೈತರಿಗೆ ತಲುಪಲು ವಿಳಂಬವಾಗಿರುವುದಕ್ಕೆ ಕಾರಣವೇನು ; (ವಿವರ ನೀಡುವುದು)

(ಇ) ತೀವ್ರ ಬರದಿಂದ ಹೈನುಗಾರಿಕೆಗೆ ಸಮಸ್ಯೆಯಾಗದಂತೆ ರೈತರಿಗೆ ಅನುಕೂಲವಾಗಲು ಸರ್ಕಾರ ಎಷ್ಟು ಮೇವು ಬ್ಯಾಂಕ್ ಸ್ಥಾಪಿಸಿದೆ ; (ಜಿಲ್ಲಾವಾರು ವಿವರ ನೀಡುವುದು) ಎಷ್ಟು ಟನ್ ಮೇವನ್ನು ವಿತರಿಸಲಾಗಿದೆ ; (ವಿವರ ನೀಡುವುದು)

(ಈ) ರಾಜ್ಯಾದ್ಯಂತ ತೀವ್ರ ಬರಗಾಲ ಇರುವುದರಿಂದ, ರೈತರ ಸಹಾಯಕ್ಕೆ ಸರ್ಕಾರ ಯಾವ ರೀತಿಯ ಸಹಾಯ ನೀಡುತ್ತಿದೆ ? (ವಿವರ ನೀಡುವುದು)

## ಲೈನ್‌ಮ್ಯಾನ್‌ಗಳ ನೇಮಕಾತಿಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೯೧ (೨೮೯) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಲೈನ್‌ಮ್ಯಾನ್‌ಗಳ ಸಂಖ್ಯೆ ಎಷ್ಟು ; (ಕಂಪನಿವಾರು ವಿವರ ನೀಡುವುದು)

(ಆ) ಹೊಸ ಸರ್ಕಾರ ಅಸ್ತಿತ್ವಕ್ಕೆ ಬಂದ ಮೇಲೆ ನೂತನವಾಗಿ ಆಯ್ಕೆ ಮಾಡಿದ ಲೈನ್‌ಮ್ಯಾನ್‌ಗಳ ಸಂಖ್ಯೆ ಎಷ್ಟು ; ಪ್ರಸ್ತುತ ತೆರವಾಗಿರುವ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಕಂಪನಿವಾರು ವಿವರ ನೀಡುವುದು)

(ಇ) ಪ್ರಸಕ್ತ ಸರ್ಕಾರ ಅಸ್ತಿತ್ವಕ್ಕೆ ಬಂದ ಮೇಲೆ ನೂತನವಾಗಿ ನೇಮಕಗೊಂಡ ಲೈನ್‌ಮ್ಯಾನ್‌ಗಳು ಅಂತರ ಜಿಲ್ಲೆ ವರ್ಗಾವಣೆಗೊಂಡವರ ಸಂಖ್ಯೆ ಎಷ್ಟು ; ಇದರಿಂದ ಉಂಟಾದ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಳ್ಳುವ ಕ್ರಮವೇನು ? (ಜಿಲ್ಲಾವಾರು ಕಂಪನಿವಾರು ವಿವರ ನೀಡುವುದು)

## ರಾಜ್ಯದಲ್ಲಿರುವ ನದಿ, ಕೆರೆ, ಕಾಲುವೆಗಳಿಂದ ಅನಧಿಕೃತ ಪಂಪುಗಳ ಮುಖಾಂತರ ಅನಧಿಕೃತ ವಿದ್ಯುತ್ ಸಂಪರ್ಕ ನೀಡುತ್ತಿರುವ ಪ್ರಕರಣಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೨೯೨ (೨೮೫೦) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ನದಿ, ಕೆರೆ, ಕಾಲುವೆಗಳಿಂದ ಅನಧಿಕೃತ ಪಂಪುಗಳ ಮುಖಾಂತರ ಕೃಷಿಗಾಗಿ ನೀರನ್ನು ಬಳಸುತ್ತಿರುವುದು ಮತ್ತು ಈ ಪಂಪುಗಳಿಗೆ ಅನಧಿಕೃತ ವಿದ್ಯುತ್ ಸಂಪರ್ಕ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ಎಷ್ಟು ಅನಧಿಕೃತ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ; ಹಾಗೂ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಅನಧಿಕೃತ ಪಂಪುಸೆಟ್ಟುಗಳ ಬಗ್ಗೆ ಸರ್ಕಾರದ ನಿಲುವೇನು ; ಏನು ಕ್ರಮ ಕೈಗೊಳ್ಳಲಾಗಿದೆ ?

## ಪಶುಸಂಗೋಪನೆ ಯೋಜನೆ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೨೯೩ (೨೮೭೫) ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರೈತರಿಗೆ ಸ್ವಾವಲಂಬಿ ಜೀವನ ನಡೆಸಲು ಪಶುಭಾಗ್ಯ ಯೋಜನೆಯನ್ನು ಜಾರಿಗೆ ತಂದಿದ್ದು, ಬ್ಯಾಂಕ್‌ಲಿಂಕ್ ಇರುವುದರಿಂದ ಪಶುಭಾಗ್ಯ ಯೋಜನೆಯಡಿ ಆಯ್ಕೆಯಾದ ರೈತರಿಗೆ ಸಾಲ ನೀಡದೆ ಇರುವುದರಿಂದ ರೈತರಿಗೆ ನಿಗದಿತ ಅವಧಿಯಲ್ಲಿ ಯೋಜನೆಯ ಲಾಭ ಸಿಗದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಹಾವೇರಿ ಜಿಲ್ಲೆಯಲ್ಲಿ ಈ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ವರ್ಷವಾರು, ಫಲಾನುಭವಿಗಳ ಹೆಸರು ಸಹಿತ ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿ ಈ ಯೋಜನೆಯಡಿ ಆಯ್ಕೆಯಾದ ಎಷ್ಟು ಜನ ಫಲಾನುಭವಿಗಳು ಈ ಯೋಜನೆಯ ಪ್ರಯೋಜನ ಪಡೆದುಕೊಂಡಿರುತ್ತಾರೆ ; ಅವರಿಗೆ ಬಿಡುಗಡೆಯಾದ ಅನುದಾನವೆಷ್ಟು ; ಬ್ಯಾಂಕ್ ಸಾಲವೆಷ್ಟು ಯಾವ ಯಾವ ಬ್ಯಾಂಕುಗಳಿಂದ ಸಾಲ ಪಡೆದಿರುತ್ತಾರೆ ; (ತಾಲ್ಲೂಕುವಾರು, ವರ್ಷವಾರು, ಫಲಾನುಭವಿವಾರು, ಬ್ಯಾಂಕುವಾರು ಮಾಹಿತಿ ನೀಡುವುದು)

(ಈ) ಆಯ್ಕೆಯಾಗಿ ಬಾಕಿ ಇರುವ ಅರ್ಜಿದಾರರಿಗೆ ಬ್ಯಾಂಕ್ ಸಾಲ ಕೊಡಿಸುವಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು ?

## ೨೦೧೮ರ ಮಹಾಮಸ್ತಕಾಭಿಷೇಕಕ್ಕೆ ಸರ್ಕಾರದ ವತಿಯಿಂದ ಬಿಡುಗಡೆಯಾಗಿರುವ ಅನುದಾನ ಮತ್ತು ಕಾಮಗಾರಿಗಳ ವಿವರ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೯೪ (೨೮೩೦) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮ರಲ್ಲಿ ನಡೆಯುವ ಶ್ರವಣಬೆಳಗೊಳದ ಮಹಾಮಸ್ತಕಾಭಿಷೇಕಕ್ಕೆ ಸರ್ಕಾರದ ವತಿಯಿಂದ ಲೋಕೋಪಯೋಗಿ ಇಲಾಖೆಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು ; (ಕಾಮಗಾರಿವಾರು ವಿವರ ನೀಡುವುದು)

(ಆ) ರಸ್ತೆ ಅಭಿವೃದ್ಧಿ ಉದ್ದೇಶಿಸಿ ಟೆಂಡರ್ ಕರೆಯಲಾಗಿರುವ ಕಾಮಗಾರಿಗಳು ಯಾವುವು ; ಟೆಂಡರ್ ಮೊತ್ತ ಎಷ್ಟು ; ಗುತ್ತಿಗೆದಾರರು ಯಾರು ; (ವಿವರ ನೀಡುವುದು)

(ಇ) ಮೇಲ್ಕಂಡ ಕಾಮಗಾರಿಗಳ ಪೈಕಿ ಪ್ರಗತಿಯಲ್ಲಿರುವ ಕಾಮಗಾರಿಗಳು ಯಾವುವು ; ಇದಕ್ಕೆ ಖರ್ಚಾಗಿರುವ ಅನುದಾನ ಎಷ್ಟು ; (ಕಾಮಗಾರಿವಾರು ಪ್ರಗತಿ ಹಂತದ ವಿವರ ಸಹಿತ ಮಾಹಿತಿ ನೀಡುವುದು)

(ಈ) ಸದರಿ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲು ಉದ್ದೇಶಿಸಿದೆ ?

## ಕೊಡಗು ಜಿಲ್ಲೆಯಲ್ಲಿನ ಜಾನುವಾರು ಹಾಗೂ ಪಶು ಆಸ್ಪತ್ರೆಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೨೯೫ (೨೮೭೮) ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ ಇರುವ ಜಾನುವಾರುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿರುವ ಪಶು ಆಸ್ಪತ್ರೆಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು ; (ತಾಲ್ಲೂಕುವಾರು ಪ್ರತಿ ಆಸ್ಪತ್ರೆಯ ವಿವರ ನೀಡುವುದು)

(ಇ) ಇಲಾಖೆಯ ಮಾನದಂಡಗಳ ಪ್ರಕಾರ ಎಷ್ಟು ಜಾನುವಾರುಗಳಿಗೆ ಅಥವಾ ಎಷ್ಟು ವಿಸ್ತೀರ್ಣದ ವ್ಯಾಪ್ತಿಗೆ ಒಂದು ಆಸ್ಪತ್ರೆ ಕಾರ್ಯ ನಿರ್ವಹಿಸಬೇಕು ; ಈ ಮಾನದಂಡ ಜಿಲ್ಲೆಯ ಮಟ್ಟಿಗೆ ಅನುಷ್ಠಾನಗೊಂಡಿದೆಯೇ ; ಅನುಷ್ಠಾನಗೊಳ್ಳದಿದ್ದಲ್ಲಿ, ಈ ಮಾನದಂಡಗಳ ಪ್ರಕಾರ ಆಸ್ಪತ್ರೆಗಳನ್ನು ಯಾವ ಕಾಲಮಿತಿಯೊಳಗೆ ಪ್ರಾರಂಭಿಸಲಾಗುವುದು ?

## ಕೃಷಿ ಉಪಕರಣಗಳ ಬಾಡಿಗೆ ವ್ಯವಸ್ಥೆಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೯೬ (೨೯೦೪) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಕೃಷಿ ಉಪಕರಣಗಳನ್ನು ಬಾಡಿಗೆಗೆ ಪಡೆಯುವ ವ್ಯವಸ್ಥೆಯನ್ನು ಮಾಡಲಾಗಿದೆಯೇ ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಮಂಡ್ಯ ಜಿಲ್ಲೆಯಲ್ಲಿ ಯಾವ ಯಾವ ಭಾಗದಲ್ಲಿ ಈ ಕೃಷಿ ಉಪಕರಣಗಳ ಬಾಡಿಗೆ ಕೇಂದ್ರ ತೆರೆಯಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಉಪಕರಣಗಳ ಬಾಡಿಗೆ ವಿವರ ಹಾಗೂ ಯಾವ ಯಾವ ಕೃಷಿ ಉಪಕರಣಗಳನ್ನು ಬಾಡಿಗೆಗೆ ನೀಡಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ತೋಟಗಾರಿಕೆ ಬೆಳೆಗಳನ್ನು ಬೆಳೆಸಲು ಹನಿ ನೀರಾವರಿ ಒದಗಿಸುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೯೭ (೨೯೧೭) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೋಟಗಾರಿಕೆ ಇಲಾಖೆಯಿಂದ ಯಾವ ಬಗೆಯ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಸರ್ಕಾರ ಹನಿ ನೀರಾವರಿ ಒದಗಿಸಲಾಗುತ್ತಿದೆ ; ಈ ಬಗ್ಗೆ ಕಾಲ ಕಾಲಕ್ಕೆ ರೈತರಿಗೆ ಮಾಹಿತಿ ಒದಗಿಸಲಾಗುತ್ತಿದೆಯೇ ; (ಮಾಹಿತಿಯ ವಿವರಗಳನ್ನು ನೀಡುವುದು ಹಾಗೂ ಆದೇಶದ ಪ್ರತಿ ನೀಡುವುದು)

(ಆ) ಹನಿ ನೀರಾವರಿ ಮೂಲಕ ತೋಟಗಾರಿಕೆ ಬೆಳೆಗಳನ್ನು ಬೆಳೆಯುವ ರೈತರಿಗೆ ವಿಮಾ ಸೌಲಭ್ಯವನ್ನು ಮಾಡಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ ;

(ಇ) ತೋಟಗಾರಿಕೆ ಇಲಾಖೆಯಿಂದ ಶಿವಮೊಗ್ಗ ಜಿಲ್ಲೆ ಮತ್ತು ಹೊನ್ನಳ್ಳಿ, ಚನ್ನಗಿರಿ ತಾಲ್ಲೂಕು ಭಾಗದ ರೈತರಿಗೆ ಸಿಗುವ ಸೌಲಭ್ಯಗಳು ಯಾವುವು ? (ವಿವರಗಳನ್ನು ಒದಗಿಸುವುದು)

## ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿರುವ ದೋಷಪೂರಿತ ತೂಗುಯಂತ್ರ ಕುರಿತು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೯೮ (೨೮೫೪) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಉಪಯೋಗಿಸುತ್ತಿರುವ ತೂಗುಯಂತ್ರಗಳು ಅನೇಕ ಕಡೆಗಳಲ್ಲಿ ದೋಷಪೂರಿತವಾಗಿದ್ದು ಇದರಿಂದ ರೈತರಿಗೆ ವಂಚನೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ತೂಗುಯಂತ್ರಗಳನ್ನು ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಎಲ್ಲೆಲ್ಲಿ ಅಳವಡಿಸಲಾಗಿದೆ ; ಅಳವಡಿಸಿಲ್ಲದ ಕಡೆ ಯಾವ ಕಾಲಮಿತಿಯಲ್ಲಿ ಅಳವಡಿಸಲಾಗುತ್ತದೆ ?

## ಕರ್ನಾಟಕ ವಿದ್ಯುತ್ ಸರಬರಾಜು ನಿಗಮಗಳ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೨೯೯ (೨೯೯೩) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಭಾಗ–ಎ ಮತ್ತು ಭಾಗ–ಬಿ ಕಾರ್ಯಕ್ರಮವನ್ನು ಎಷ್ಟು ವರ್ಷಗಳಿಂದ ಜಾರಿಗೊಳಿಸಲಾಗಿದೆ ; ಅನುಕ್ರಮವಾಗಿ ಕಳೆದ ಮೂರು ವರ್ಷಗಳಲ್ಲಿ ಈ ಕಾರ್ಯಕ್ರಮಕ್ಕೆ ಒಟ್ಟಾರೆ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ ; ಯಾವ ಯಾವ ಎಸ್ಕಾಂಗಳು ಈ ಕಾರ್ಯಕ್ರಮವನ್ನು ಪೂರ್ಣವಾಗಿ ಅನುಷ್ಠಾನಗೊಳಿಸಿವೆ ;

(ಆ) ಎಸ್ಕಾಂಗಳು ಭಾಗ–ಎ ಕಾರ್ಯಕ್ರಮವನ್ನು ಪವರ್ ಫೈನಾನ್ಸ್ ಕಾರ್ಪೋರೇಷನ್ ಮಾರ್ಗಸೂಚಿಗೆ ಅನುಗುಣವಾಗಿ ಜಾರಿಗೊಳಿಸಿದೆಯೇ ; ಮತ್ತು ಎಷ್ಟು ನಗರ/ಪಟ್ಟಣಗಳಲ್ಲಿ ಅನುಷ್ಠಾನಗೊಳಿಸಲಾಗಿದೆ ; ರಾಜ್ಯದಲ್ಲಿ ಮೀಟರ್‌ಗಳಿಲ್ಲದ ಎಷ್ಟು ವಿತರಣಾ ಟ್ರಾನ್ಸ್‌ಫಾರ್ಮರ್ ಕೇಂದ್ರಗಳು ಇರುತ್ತವೆ ;

(ಇ) ಭಾಗ–ಬಿ ಅಡಿಯಲ್ಲಿ ವಿದ್ಯುತ್ ವಿತರಣಾ ಸಂಪರ್ಕ ಜಾಲದ ಕಾಮಗಾರಿಗಳನ್ನು ಬಲಪಡಿಸುವುದಕ್ಕೆ ಎಷ್ಟು ಗುತ್ತಿಗೆದಾರರಿಗೆ ಕಾಮಗಾರಿಯನ್ನು ನೀಡಲಾಗಿತ್ತು ; ಸದರಿ ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲಾಗಿದೆಯೇ ; ಷರತ್ತು ಉಲ್ಲಂಘನೆಯ ಮತ್ತು ಉಪಕರಣಗಳ ಕಾರ್ಯಾರಂಭ ಇಲ್ಲದೇ ಎಷ್ಟು ಹಣ ಹೆಚ್ಚುವರಿಯಾಗಿ ಪಾವತಿ ಮಾಡಲಾಗಿದೆ ;

(ಈ) ಕಳೆದ ಮೂರು ವರ್ಷಗಳಲ್ಲಿ ವಿದ್ಯುತ್ ವಿತರಣಾ ಸಲಹಾ ಸಮಿತಿಯು ಯೋಜನೆಯ ಅನುಷ್ಠಾನಕ್ಕೆ ಎಷ್ಟು ಸಭೆಗಳನ್ನು ನಡೆಸಿರುತ್ತದೆ ; ಎಸ್ಕಾಂಗಳ

ಮೇಲಾಧಿಕಾರಿಗಳ ಮಟ್ಟದಲ್ಲಿ ಸಭೆಯು ನಡೆದಿರುತ್ತದೆಯೇ ; ನಡೆದಿದ್ದಲ್ಲಿ, ಯಾವ ಯಾವ ಅನುಷ್ಠಾನದ ಸಮಸ್ಯೆಗಳನ್ನು ಗುರುತಿಸಲಾಗಿದೆ ;

(ಉ) ಸೌರಶಕ್ತಿ ಉತ್ಪಾದನೆಯ ಯೋಜನೆಗೆ ಅನುಗುಣವಾಗಿ ರಾಜ್ಯದಲ್ಲಿ ರೈತ ವಿಭಾಗದಲ್ಲಿ / ವರ್ಗದಲ್ಲಿ ಕೃಷಿ ಭೂಮಿಯನ್ನು ಹೊಂದಿದವರಿಗೆ ಮಾತ್ರ ಯೋಜನೆಯ ಲಾಭ ನೀಡಲು ನಿಯಮಾವಳಿ ರಚಿಸಲಾಗಿತ್ತೇ ; ಯೋಜನೆಯ ಹಂಚಿಕೆಯ ನಂತರ ನಿಯಮಾವಳಿಗಳ ವಿರುದ್ಧವಾಗಿ ಭೂಮಿಯ ವ್ಯಾಪ್ತಿಯ ಬದಲಾವಣೆಗೆ ಅನುವು ಮಾಡಿಕೊಡಲಾಗಿದೆಯೇ ; ಅನುವು ಮಾಡಿದ್ದಲ್ಲಿ, ಎಷ್ಟು ಜನರಿಗೆ ಮತ್ತು ಯಾವ ಸ್ಥಳದಲ್ಲಿ ಇಂತಹ ಬದಲಾವಣೆ ಮಾಡಲಾಗಿದೆ ?

## ಗೋಹತ್ಯೆ ನಿಷೇಧ ಹಾಗೂ ಕಸಾಯಿಖಾನೆ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೦೦ (೯೭೨೨+೨೮೪೭) ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರ ಇತ್ತೀಚೆಗೆ ಹೊರಡಿಸಿರುವ ಸಂವಿಧಾನದ ೪೮ರ ಪರಿಚ್ಛೇದದಡಿ ಗೋಹತ್ಯೆ ನಿಷೇದಕ್ಕೆ ಇರುವ ಮಾನದಂಡಗಳೇನು ; (ವಿವರ ನೀಡುವುದು)

(ಆ) ಕೇಂದ್ರ ಸರ್ಕಾರದ ಈ ಆದೇಶವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ರಾಜ್ಯದಲ್ಲಿರುವ ಒಟ್ಟು ಕಸಾಯಿಖಾನೆಗಳ ಸಂಖ್ಯೆ ಎಷ್ಟು ; ಕಸಾಯಿಖಾನೆಗಳನ್ನು ಪ್ರಾರಂಭಿಸಲು ಇರುವ ಮಾನದಂಡಗಳೇನು ; ಕಳೆದ ೦೪ ವರ್ಷಗಳಲ್ಲಿ ಕಸಾಯಿಖಾನೆಗಳನ್ನು ಪ್ರಾರಂಭಿಸಲು ರಾಜ್ಯ ಸರ್ಕಾರ ಅನುಮತಿ ನೀಡಿದೆಯೇ ;

(ಈ) ಅಧಿಕೃತ ಹಾಗೂ ಅನಧಿಕೃತ ಕಸಾಯಿಖಾನೆಗಳ ಸಂಖ್ಯೆ ಎಷ್ಟು ; ಕೇಂದ್ರ ಸರ್ಕಾರ ಗೋಹತ್ಯೆ ನಿಷೇಧಿಸಿರುವ ಹಿನ್ನೆಲೆಯಲ್ಲಿ, ಅಂತಹ ಕಸಾಯಿಖಾನೆಗಳನ್ನು ಮುಚ್ಚುವ ಕುರಿತು ಸರ್ಕಾರದ ಕ್ರಮವೇನು ;

(ಉ) ಅನಧಿಕೃತವಾಗಿ ಕಸಾಯಿಖಾನೆಗಳನ್ನು ಪ್ರಾರಂಭಿಸಿರುವವರ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ ; ಗೋಹತ್ಯೆ ನಿಷೇಧದ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು ; ರಾಜ್ಯ ಸರ್ಕಾರ ಈ ಆದೇಶದ ಮೇಲೆ ಕೈಗೊಂಡಿರುವ ಹಾಗೂ ಕೈಗೊಳ್ಳಲಿರುವ ಕ್ರಮವೇನು ? (ವಿವರ ನೀಡುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು, ಕಾ.ಸೂ. 219 – ಪಿ5